**ದಿನಾಂಕಃ 10.10.2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃ**

ನಾನು ಈ ದಿನ ನನ್ನ ಪ್ರಮಾಣಪತ್ರಿಕೆ ಹಾಜರುಪಡಿಸಿರುತ್ತೇನೆ. ಅದರಲ್ಲಿ ಬರೆಸಿರುವ ಸಂಗತಿಗಳು ನನ್ನ ತಿಳುವಳಿಕೆ, ನಂಬಿಕೆ ಹಾಗೂ ಮಾಹಿತಿಗೆ ಇದ್ದು, ಅದರಲ್ಲಿ ಬರೆದಿರುವ ಸಂಗತಿಗಳು ಸತ್ಯವಾಗಿರುತ್ತದೆ ಮತ್ತು ನಾನು ಹೇಳಿ ಬರೆಸಿದ ಸಂಗತಿಗಳಾಗಿರುತ್ತದೆ.

ದಾವಾ ಸ್ವತ್ತಿಗೆ ಸಂಬಂಧಿಸಿದಂತೆ 9 ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿರುತ್ತೇನೆ, ಅವುಗಳನ್ನು **ನಿಪಿ-1 ರಿಂದ ನಿಪಿ-9** ಎಂದು ಗುರುತಿಸಲಾಯಿತು. ಇ ಖಾತಾ ತಃಖ್ತೆ ಹಾಜರುಪಡಿಸಿರುತ್ತೇನೆ, ಅದನ್ನು **ನಿಪಿ-10** ಎಂದು ಗುರುತಿಸಲಾಯಿತು. ದಿಃ25-8-2011ರ ನೋಂದಾಯಿತ ದಾನಪತ್ರದ ದೃಢೀಕೃತ ನಕಲು ಹಾಜರುಪಡಿಸಿರುತ್ತೇನೆ, ಅದನ್ನು **ನಿಪಿ-11** ಎಂದು ಗುರುತಿಸಲಾಯಿತು. ಆದುದರಿಂದ ದಾವೆಯಲ್ಲಿ ಕೇಳಿದಂತೆ ಪರಿಹಾರ ಕೋರುತ್ತೇನೆ.

**ಪಾಟೀಸವಾಲುಃ 1 ನೇ ಪ್ರತಿವಾದಿ ಪರ ವಕೀಲರಿಂದಃ**

(1 ನೇ ಪ್ರತಿವಾದಿ ಪರ ವಕೀಲರು ಗೈರುಹಾಜರಿದ್ದ ಕಾರಣ, ಹಾಗೂ 2 ನೇ ಪ್ರತಿವಾದಿ ಖುದ್ದು ಹಾಜರಿದ್ದು, ಪಾಟೀಸವಾಲಿಗೆ ಸಮಯಾವಕಾಶ ಕೋರಿದ ಕಾರಣ, ಮುಂದೂಡಲಾಗಿದೆ)

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಸಾಕ್ಷ್ಯವನ್ನು ನನ್ನ ಉಕ್ತಲೇಖನದಂತೆ ಗಣಕೀಕರಣಗೊಳಿಸಿ ಮುದ್ರಿಸಲಾಯಿತು.)

ಓ ಹೇ ಕೇ ಸರಿ ಇದೆ

(ದೇವಾನಂದ)
ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ
ನ್ಯಾಯಾಧೀಶರು, ಚನ್ನರಾಯಪಟ್ಟಣ